# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 467
ಸದಸ್ಯರ ಹೆಸರು : ಶ್ರೀ ಎಂ.ಎ.ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 13.12.2018
ಉತ್ತರಿಸುವ ಸಚಿವರು : ಮುಖ್ಯಮಂತ್ರಿಯವರು

**********

| | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಬಹುತೇಕ ಇಲಾಖೆಗಳು ಕ್ರಿಯಾ ಯೋಜನೆಗಳನ್ನು ರೂಪಿಸುವಾಗ ಸ್ಥಳೀಯ ಚುನಾಯಿತ ಪ್ರತಿನಿಧಿಗಳ ಅಭಿಪ್ರಾಯಗಳನ್ನು ಪಡೆದು ಸಾರ್ವಜನಿಕರಿಗೆ ಅತ್ಯಾವಶ್ಯಕ ವಾಗಿರುವ ಕಾಮಗಾರಿಗಳನ್ನು ಕೈಗೊಂಡು ಸ್ಪಂದಿಸುತ್ತಿರುವಾಗ ವಿದ್ಯುತ್ ನಿಗಮಗಳು ಮಾತ್ರ ಚುನಾಯಿತ ಪ್ರತಿನಿಧಿಗಳನ್ನು ಕಡೆಗಣಿಸಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು) | • ಇಂಧನ ಇಲಾಖೆಯ ಎಲ್ಲಾ ಅಧೀನ ಸಂಸ್ಥೆಗಳು ಚುನಾಯಿತ ಪ್ರತಿನಿಧಿಗಳು/ ಸ್ಥಳೀಯ ಪ್ರತಿನಿಧಿಗಳ ಸಲಹೆ/ಅಭಿಪ್ರಾಯಗಳನ್ನು ಪರಿಗಣಿಸಿ ಕಾರ್ಯನಿರ್ವಹಿಸುತ್ತಿವೆ.<br>• ಚುನಾಯಿತ ಪ್ರತಿನಿಧಿಗಳು ನೀಡುವ ಉಪಕೇಂದ್ರಗಳ ಸ್ಥಾಪನೆ, ಶಾಖಾ ಕಛೇರಿ/ ಉಪವಿಭಾಗ/ ವಿಭಾಗೀಯ ಕಛೇರಿಗಳ ರಚನೆ ಇತ್ಯಾದಿಗಳ ಕುರಿತ ಪ್ರಸ್ತಾವನೆಗಳ ತಾಂತ್ರಿಕ ಸಾಧ್ಯತೆಯನ್ನು ಪರಿಶೀಲಿಸಿ, ಮಂಡಳಿ ನಿರ್ದೇಶಕರುಗಳ ಸಭೆಯಲ್ಲಿ ಅನುಮೋದಿತವಾದ ನಂತರ ಅಗತ್ಯ ಕ್ರಮ ವಹಿಸಲಾಗುತ್ತಿದೆ.<br>• ರಾಜ್ಯ ಸರ್ಕಾರದ ಆಯವ್ಯಯ ಘೋಷಣೆಯಂತೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>• ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ ಪ್ರತಿಷ್ಠಿತ ಕಾರ್ಯಕ್ರಮ/ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. |
| ಆ) | ಸಾರ್ವಜನಿಕರು ವಿದ್ಯುತ್ ನಿಗಮಗಳಿಗೆ ದೂರನ್ನು ನೀಡಿ ಅನೇಕ ಬಾರಿ ಅಲೆದಾಡಿದರೂ ಸರಿಯಾದ ಸ್ಪಂದನೆ ಅಧಿಕಾರಿಗಳಿಂದ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು) | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರು ದಾಖಲಿಸುವ ದೂರುಗಳನ್ನು ತ್ವರಿತಗತಿಯಲ್ಲಿ ಶೀಘ್ರವಾಗಿ ಪರಿಹರಿಸಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• ವಿದ್ಯುತ್ ಗ್ರಾಹಕರು ಶುಲ್ಕ ರಹಿತ ಸಹಾಯವಾಣಿ "1912" ಕ್ಕೆ ಕರೆಮಾಡಿ ತಮ್ಮ ದೂರುಗಳನ್ನು ದಾಖಲಿಸಬಹುದಾಗಿದ್ದು, ಸದರಿ ಸಹಾಯವಾಣಿಯು 24x7 ಚಾಲನೆಯಲ್ಲಿರುತ್ತದೆ. ಈ ರೀತಿ, ದಾಖಲಾಗುವ ದೂರಗಳನ್ನು ತ್ವರಿತಗತಿಯಲ್ಲಿ ಬಗೆಹರಿಸಲು ಕ್ರಮ ವಹಿಸಲಾಗಿದೆ.<br>• ಕೆ.ಇ.ಆರ್.ಸಿ ರವರ ನಿರ್ದೇಶನದಂತೆ ಜಿಲ್ಲಾವಾರು ಗ್ರಾಹಕರ ಕುಂದುಕೊರತೆ ನಿವಾರಣಾ ವೇದಿಕೆಯು (ಸಿ.ಜಿ.ಆರ್.ಎಫ್) ಸಾರ್ವಜನಿಕರ ದೂರುಗಳನ್ನು ನಿವಾರಿಸಲು ಕಾರ್ಯನಿರ್ವಹಿಸುತ್ತಿವೆ.<br>• ಉಪವಿಭಾಗ ಮಟ್ಟದಲ್ಲಿ ಸ್ಥಳೀಯವಾಗಿ ಜನ ಸಂಪರ್ಕ ಸಭೆಗಳನ್ನು ಏರ್ಪಡಿಸಲಾಗುತ್ತಿದೆ. ಸಾರ್ವಜನಿಕರ ದೂರುಗಳನ್ನು ಸ್ಥಳೀಯವಾಗಿ ಬಗೆಹರಿಸಲಾಗುತ್ತಿದೆ. ಅಲ್ಲದೇ, ಸಾರ್ವಜನಿಕರು ಇಲಾಖಾ ಅಧಿಕಾರಿಗಳಿಗೆ ನೇರವಾಗಿ/ ದೂರವಾಣಿ ಮುಖಾಂತರವೂ ಸಹ ದೂರು ದಾಖಲಿಸಬಹುದಾಗಿದ್ದು, ನಿಯಮಾನುಸಾರ ತ್ವರಿತಗತಿಯಲ್ಲಿ ದೂರುಗಳನ್ನು ಬಗೆಹರಿಸಲಾಗುತ್ತಿದೆ. |

....2)

| | | |
|---|---|---|
| ಇ) | ಟ್ರಾನ್ಸ್‌ಫಾರ್ಮರ್‌ಗಳು ಹಾಳಾದರೆ (ಸುಟ್ಟು ಹೋಗುವುದು ಮತ್ತು ಇತರೆ ಕಾರಣಗಳಿಂದ) ಇದನ್ನು ಬದಲಾಯಿಸಲು ಇರುವ ಮಾನದಂಡಗಳೇನು; ಎಷ್ಟು ದಿನಗಳಲ್ಲಿ ಬದಲಾಯಿಸಲಾಗುವುದು; ಈ ರೀತಿ ಬದಲಾವಣೆ ಮಾಡಲು ಸಾಕಷ್ಟು ದಿನಗಳು ತೆಗೆದುಕೊಳ್ಳುವುದರಿಂದ ರೈತರಿಗೆ ಆಗುತ್ತಿರುವ ಅನಾನುಕೂಲಗಳ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಕೆ.ಇ.ಆರ್.ಸಿ ನಿಯಮಾವಳಿಗಳನ್ವಯ ನಗರ/ಪಟ್ಟಣ ಪ್ರದೇಶಗಳಲ್ಲಿ ಹಾಗೂ ಕುಡಿಯುವ ನೀರಿನ ಸ್ಥಾವರಗಳ ವಿಫಲಗೊಳ್ಳುವ ಪರಿವರ್ತಕಗಳನ್ನು 24 ಗಂಟೆಯೊಳಗೆ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ವಿಫಲಗೊಳ್ಳುವ ಪರಿವರ್ತಕಗಳನ್ನು 72 ಗಂಟೆಯೊಳಗೆ ಬದಲಿಸಬೇಕಾಗಿದೆ.<br><br>ರಾಜ್ಯಾದ್ಯಂತ ವಿಫಲಗೊಳ್ಳುವ ಪರಿವರ್ತಕಗಳನ್ನು ಶೀಘ್ರವಾಗಿ ದುರಸ್ತಿಗೊಳಿಸಲು ಒಟ್ಟು 144 ಪರಿವರ್ತಕ ದುರಸ್ತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಹಾಗೂ ವಿಫಲಗೊಳ್ಳುವ ಪರಿವರ್ತಕಗಳನ್ನು ತ್ವರಿತಗತಿಯಲ್ಲಿ ಬದಲಾಯಿಸಲು ಅನುಕೂಲವಾಗುವಂತೆ ಒಟ್ಟು 188 ಪರಿವರ್ತಕ ಬ್ಯಾಂಕ್‌ಗಳನ್ನು ಸ್ಥಾಪಿಸಲಾಗಿದೆ.<br><br>ಈ ಮೂಲಕ, ವಿಫಲಗೊಳ್ಳುವ ಪರಿವರ್ತಕಗಳನ್ನು ತ್ವರಿತಗತಿಯಲ್ಲಿ ಬದಲಾಯಿಸಲು ಕ್ರಮ ವಹಿಸಲಾಗಿದೆ. |

**ಸಂಖ್ಯೆ: ಇಎನ್ 229 ಇಬಿಎಸ್ 2018**

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ